ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಬೆಂಗಳೂರು ನಗರದಲ್ಲಿ ಮಳೆಯಿಂದ ಮರಗಳು ನೆಲಕ್ಕೆ ಉರುಳುತ್ತಿರುವ ಬಗ್ಗೆ

ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):-

380 (213) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಕಳೆದ ಒಂದು ವರ್ಷದಲ್ಲಿ 600 ಕ್ಕೂ ಹೆಚ್ಚು ಮರಗಳು ಮಳೆಯಿಂದಾಗಿ ನೆಲಕ್ಕುರುಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರು ನಗರದಲ್ಲಿ ಮರಗಳನ್ನು ಉಳಿಸಲು, ಬೆಳೆಸಲು, 'ಹಸಿರು ನಗರ' ಎಂಬ ಖ್ಯಾತಿಯನ್ನು ಸಂರಕ್ಷಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಮಳೆಗಾಲದಲ್ಲಿ ಮರಗಳು ಬೀಳುವುದರಿಂದ ಉಂಟಾಗುತ್ತಿರುವ ಪ್ರಾಣ ಹಾನಿ, ನಷ್ಟ, ವಿದ್ಯುತ್ ಸಮಸ್ಯೆ ಮುಂತಾದ ಅನಾಹುತಗಳನ್ನು ತಪ್ಪಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?